Akashvani : Bangalore

National Bulletins In Kannada

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

19.08.2025 1.10pm

**********

## ಮುಖ್ಯಾಂಶಗಳು

- ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳ ಗದ್ದಲ: ಸಂಸತ್ತಿನ ಉಭಯ ಸದನಗಳ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ
- ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಅವರೊಂದಿಗೆ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ಮಾತುಕತೆ
- ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಇಂದಿನಿಂದ ಮೂರು ದಿನ ರಷ್ಯಾ ಪ್ರವಾಸ
- ಕಾರ್ಲೋಸ್ ಅಲ್ಕರಾಜ್‌ಗೆ ಚೊಚ್ಚಲ ಸಿನ್ಸಿನಾಟಿ ಓಪನ್ ಟೆನಿಸ್ ಪ್ರಶಸ್ತಿ ಗರಿ

><><><><><><><><

ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿರೋಧ ಪಕ್ಷಗಳು ಗದ್ದಲ ಎಬ್ಬಿಸಿದ ಹಿನ್ನೆಲೆಯಲ್ಲಿ ಸಂಸತ್ತಿನ ಉಭಯ ಸದನಗಳ ಕಲಾಪವನ್ನು ಇಂದು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ. ರಾಜ್ಯಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಉಪ ಸಭಾಪತಿ ಹರಿವಂಶ್, ನಾನಾ ವಿಷಯಗಳಿಗೆ ಸಂಬಂಧಿಸಿದಂತೆ ವಿವಿಧ ರಾಜಕೀಯ ಪಕ್ಷಗಳಿಂದ ೨೦ ಮುಂದೂಡಿಕೆ ಸೂಚನೆಗಳನ್ನು ಸ್ವೀಕರಿಸಿರುವುದಾಗಿ ಹೇಳಿದರು. ಆದರೆ ತೀರ್ಪನ್ನು ಉಲ್ಲೇಖಿಸಿ ಸೂಚನೆಗಳನ್ನು ತಿರಸ್ಕರಿಸಲಾಯಿತು. ಇದರ ನಂತರ, ವಿರೋಧ ಪಕ್ಷದ ಸದಸ್ಯರು ಘೋಷಣೆಗಳನ್ನು ಕೂಗಲು ಪ್ರಾರಂಭಿಸಿದರು. ಹರಿವಂಶ್, ಶೂನ್ಯ ವೇಳೆಯನ್ನು ನಡೆಸಲು ಪ್ರಯತ್ನಿಸಿದರು ಮತ್ತು ಸುಗಮ ಕಲಾಪಕ್ಕೆ ಅವಕಾಶ ನೀಡುವಂತೆ ವಿರೋಧ ಪಕ್ಷದ ಸದಸ್ಯರನ್ನು ಒತ್ತಾಯಿಸಿದರು. ಆದರೆ ವಿರೋಧ ಪಕ್ಷದ ಸದಸ್ಯರು ತಮ್ಮ ಪ್ರತಿಭಟನೆಯನ್ನು ಮುಂದುವರೆಸಿದರು. ಗದ್ದಲ ಮುಂದುವರಿದಂತೆ, ಉಪ ಸಭಾಪತಿಯವರು ಸದನವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಿದರು. ಇನ್ನೊಂದೆಡೆ, ಲೋಕಸಭೆಯಲ್ಲಿ ಇಂದು ಬೆಳಗ್ಗೆ ೧೧ ಗಂಟೆಗೆ ಸದನ ಸೇರಿದಾಗ, ಲೋಕಸಭಾಧ್ಯಕ್ಷ ಓಂ ಬಿರ್ಲಾ ಅವರು ಕಾಶ್ಮೀರಿ, ಕೊಂಕಣಿ ಮತ್ತು ಸಂತಾಲಿ ಭಾಷೆಗಳಲ್ಲಿ ಕಲಾಪದ ವಿವರಣೆ ಈಗ ಲಭ್ಯವಿದೆ ಎಂದು ಸದನಕ್ಕೆ ತಿಳಿಸಿದರು. ಹಿಂದಿ ಮತ್ತು ಇಂಗ್ಲಿಷ್ ಹೊರತುಪಡಿಸಿ, ಇಲ್ಲಿಯವರೆಗೆ ಅಸ್ಸಾಮಿ, ಬಂಗಾಳಿ, ಬೋಡೋ, ಡೋಗ್ರಿ, ಗುಜರಾತಿ, ಕನ್ನಡ, ಮೈಥಿಲಿ, ಮಲಯಾಳಂ, ಮಣಿಪುರಿ, ಮರಾಠಿ, ನೇಪಾಳಿ, ಒಡಿಯಾ, ಪಂಜಾಬಿ, ಸಂಸ್ಕೃತ, ಸಿಂಧಿ, ತಮಿಳು, ತೆಲುಗು ಮತ್ತು ಉರ್ದು ಸೇರಿದಂತೆ ೧೮ ಭಾಷೆಗಳಲ್ಲಿ ಕಲಾಪದ ವಿವರಣೆ ಸೌಲಭ್ಯಗಳನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು. ಕಾಶ್ಮೀರಿ, ಕೊಂಕಣಿ ಮತ್ತು ಸಂತಾಲಿ ಭಾಷೆಗಳನ್ನು ಸೇರಿಸುವುದರೊಂದಿಗೆ, ಸದನವು ಸಂವಿಧಾನದ ೮ನೇ ಅನುಸೂಚಿಯ ಎಲ್ಲಾ ೨೨ ಭಾಷೆಗಳಲ್ಲಿ ವಿವರಣೆ ಸೌಲಭ್ಯಗಳನ್ನು ಒದಗಿಸುತ್ತಿದೆ ಎಂದು ಓಂ ಬಿರ್ಲಾ ಮಾಹಿತಿ ನೀಡಿದರು. ಅದರ ನಂತರ, ಲೋಕಸಭಾಧ್ಯಕ್ಷರು ಪ್ರಶ್ನೋತ್ತರ ಅವಧಿಯನ್ನು ನಡೆಸಲು ಪ್ರಯತ್ನಿಸಿದರು. ಆದರೆ ವಿರೋಧ ಪಕ್ಷಗಳು ಬಿಹಾರದಲ್ಲಿ ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ವಿಷಯದ ಕುರಿತು ಚರ್ಚೆಗೆ ಒತ್ತಾಯಿಸಿ ಪ್ರತಿಭಟನೆಯನ್ನು ಪ್ರಾರಂಭಿಸಿದವು. ಸುಗಮ ಕಲಾಪಕ್ಕೆ ಅವಕಾಶ ನೀಡುವಂತೆ ಪ್ರತಿಭಟನಾನಿರತ ಸದಸ್ಯರಿಗೆ ಓಂ ಬಿರ್ಲಾ ಒತ್ತಾಯಿಸಿದರು. ಪದೇ ಪದೆ ಮನವಿ ಮಾಡಿದರೂ ವಿರೋಧ ಪಕ್ಷದ ಸದಸ್ಯರು

ತಮ್ಮ ಪ್ರತಿಭಟನೆಯನ್ನು ಮುಂದುವರಿಸಿದರು. ನಂತರ ಲೋಕಸಭಾಧ್ಯಕ್ಷರು ಸದನವನ್ನು ಮಧ್ಯಾಹ್ನ ೧೨ ಗಂಟೆಗೆ ಮುಂದೂಡಿದರು. ಮಧ್ಯಾಹ್ನ ೧೨ ಗಂಟೆಗೆ ಪುನಃ ಸದನ ಸೇರಿದಾಗ ವಿಪಕ್ಷಗಳ ಸದಸ್ಯರು ಪ್ರತಿಭಟನೆ ಮುಂದುವರಿಸಿದ ಕಾರಣ, ಕಲಾಪವನ್ನು ಮಧ್ಯಾಹ್ನ ೨ ಗಂಟೆಗೆ ಮುಂದೂಡಲಾಗಿದೆ.

><><><><><><><

ಭಾರತ ಮತ್ತು ಚೀನಾ ನಡುವಿನ ಗಡಿ ಸಮಸ್ಯೆ ಕುರಿತು ರಾಷ್ಟ್ರೀಯ ಭದ್ರತಾ ಸಲಹೆಗಾರ ಅಜಿತ್ ದೋವಲ್ ಮತ್ತು ಚೀನಾ ವಿದೇಶಾಂಗ ಸಚಿವ ವಾಂಗ್ ಯಿ ನೇತೃತ್ವದ ವಿಶೇಷ ಪ್ರತಿನಿಧಿಗಳ ೨೪ನೇ ಸುತ್ತಿನ ಸಂವಾದ ನವದೆಹಲಿಯಲ್ಲಿ ಆರಂಭವಾಗಿದೆ. ಅಧಿಕಾರಿಗಳ ಪ್ರಕಾರ, ಈ ಸಭೆಯು ಗಡಿ ಪರಿಸ್ಥಿತಿ, ವ್ಯಾಪಾರ ಮತ್ತು ಉಭಯ ರಾಷ್ಟ್ರಗಳ ನಡುವಿನ ವಿಮಾನ ಸೇವೆಗಳ ಪುನರಾರಂಭ ಸೇರಿದಂತೆ ಹಲವಾರು ವಿಷಯಗಳನ್ನು ಒಳಗೊಳ್ಳುವ ನಿರೀಕ್ಷೆಯಿದೆ. ನಂತರ ಚೀನಾ ವಿದೇಶಾಂಗ ಸಚಿವ ವಾಂಗ್ ಯಿ, ಪ್ರಧಾನಿ ನರೇಂದ್ರ ಮೋದಿ ಅವರನ್ನು ಭೇಟಿ ಮಾಡಲಿದ್ದಾರೆ. ಈ ತಿಂಗಳ ಕೊನೆಯಲ್ಲಿ ಟಿಯಾಂಜಿನ್‌ನಲ್ಲಿ ನಡೆಯಲಿರುವ ಶಾಂಘೈ ಸಹಕಾರ ಸಂಸ್ಥೆ ಶೃಂಗಸಭೆಯಲ್ಲಿ ಭಾಗವಹಿಸಲು ಪ್ರಧಾನಿ ಮೋದಿ ಅವರು ಚೀನಾಕ್ಕೆ ಭೇಟಿ ನೀಡಲಿರುವ ಮುನ್ನ ಈ ಸಭೆ ನಡೆದಿದೆ.

><><><><><><><

ನವದೆಹಲಿಯಲ್ಲಿ ಇಂದು ಎನ್‌ಡಿಎ ಸಂಸದೀಯ ಪಕ್ಷದ ಸಭೆ ನಡೆಯಿತು. ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು ಎನ್‌ಡಿಎ ಒಕ್ಕೂಟದ ಉಪರಾಷ್ಟ್ರಪತಿ ಅಭ್ಯರ್ಥಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಸಭೆಗೆ ಪರಿಚಯಿಸಿ, ಸನ್ಮಾನಿಸಿದರು. ಸಭೆಯ ನಂತರ ಈ ಕುರಿತು ಮಾಧ್ಯಮಗಳಿಗೆ ಮಾಹಿತಿ ನೀಡಿದ ಕೇಂದ್ರ ಸಂಸದೀಯ ವ್ಯವಹಾರಗಳ ಸಚಿವ ಕಿರಣ್ ರಿಜಿಜು, ವಿರೋಧ ಪಕ್ಷದವರು ಸೇರಿದಂತೆ ಎಲ್ಲಾ ಸಂಸದರು ಉಪರಾಷ್ಟ್ರಪತಿಯಾಗಿ ಸಿ.ಪಿ.ರಾಧಾಕೃಷ್ಣನ್ ಅವರನ್ನು ಸರ್ವಾನುಮತದಿಂದ ಆಯ್ಕೆ ಮಾಡುವಂತೆ ಪ್ರಧಾನಿ ನರೇಂದ್ರ ಮೋದಿ ಮನವಿ ಮಾಡಿದ್ದಾರೆ ಎಂದು ಹೇಳಿದರು.

**ಧ್ವನಿ : ಕಿರಣ್ ರಿಜಿಜು (೨೬ ಸೆಕೆಂಡುಗಳು)**

><><><><><><><

ಪತ್ರಿಕೆಗಳು ಮತ್ತು ನಿಯತಕಾಲಿಕೆಗಳ ನೋಂದಣಿ ಪ್ರಕ್ರಿಯೆಯನ್ನು ಸರಳಗೊಳಿಸುವ ನಿಟ್ಟಿನಲ್ಲಿ ಪ್ರೆಸ್ ಸೇವಾ ಪೋರ್ಟಲ್ ಪರಿಚಯಿಸಲಾಗಿದೆ ಎಂದು ಪ್ರೆಸ್ ರಿಜಿಸ್ಟ್ರಾರ್ ಜನರಲ್ ಆಫ್ ಇಂಡಿಯಾ ಯೋಗೇಶ್ ಬವೇಜಾ ತಿಳಿಸಿದ್ದಾರೆ. ಈ ಉಪಕ್ರಮವು ಪಾರದರ್ಶಕತೆಯನ್ನು ಹೆಚ್ಚಿಸುತ್ತದೆ, ಅನುಮೋದನೆಗಳನ್ನು ವೇಗಗೊಳಿಸುತ್ತದೆ ಮತ್ತು ಪ್ರಕಾಶಕರಿಗೆ ವ್ಯವಹಾರ ಮಾಡುವ ಸುಲಭತೆಯನ್ನು ಸುಧಾರಿಸುತ್ತದೆ ಹಾಗೂ ಪ್ರಕಾಶಕರು ಎದುರಿಸುತ್ತಿರುವ ಸಮಸ್ಯೆಗಳನ್ನು ಪರಿಹರಿಸುತ್ತದೆ ಎಂದು ಅವರು ಹೇಳಿದರು. ಕೇಂದ್ರ ಮತ್ತು ಪ್ರಸಾರ ಸಚಿವಾಲಯದ ಅಡಿಯಲ್ಲಿ ಹೈದರಾಬಾದ್‌ನ ಭಾರತ ಸರ್ಕಾರದ ವಾರ್ತಾ ಶಾಖೆ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಯೋಗೇಶ್ ಬವೇಜಾ, ಪ್ರಕಾಶಕರೊಂದಿಗೆ ಸಂವಾದ ನಡೆಸಿದರು.

><><><><><><><

ವಿದೇಶಾಂಗ ಸಚಿವ ಡಾ. ಎಸ್.ಜೈಶಂಕರ್ ಇಂದಿನಿಂದ ಮೂರು ದಿನಗಳ ಕಾಲ ರಷ್ಯಾಗೆ ಭೇಟಿ ನೀಡಲಿದ್ದಾರೆ. ಅವರು ನಾಳೆ ಮಾಸ್ಕೋದಲ್ಲಿ ನಡೆಯಲಿರುವ ವ್ಯಾಪಾರ, ಆರ್ಥಿಕ, ವೈಜ್ಞಾನಿಕ, ತಾಂತ್ರಿಕ ಮತ್ತು ಸಾಂಸ್ಕೃತಿಕ ಸಹಕಾರ ಕುರಿತ ಭಾರತ-ರಷ್ಯಾ ಅಂತರ-ಸರ್ಕಾರಿ ಆಯೋಗದ ೨೬ನೇ ಅಧಿವೇಶನದ ಸಹ-ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಮಯದಲ್ಲಿ, ಡಾ. ಜೈಶಂಕರ್, ರಷ್ಯಾ ವಿದೇಶಾಂಗ ಸಚಿವ ಸೆರ್ಗೆಯ್ ಲಾವ್ರೊವ್ ಅವರೊಂದಿಗೆ ಚರ್ಚೆ ನಡೆಸಲಿದ್ದಾರೆ

ಹಾಗೂ ಭಾರತ-ರಷ್ಯಾ ವ್ಯಾಪಾರ ವೇದಿಕೆಯನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಉಭಯ ನಾಯಕರು ದ್ವಿಪಕ್ಷೀಯ ಕಾರ್ಯಸೂಚಿಯನ್ನು ಪರಿಶೀಲಿಸಲಿದ್ದು, ಪ್ರಾದೇಶಿಕ ಮತ್ತು ಜಾಗತಿಕ ವಿಷಯಗಳ ಕುರಿತು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಳ್ಳಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

><><><><><><

ರಷ್ಯಾ ಮತ್ತು ಉಕ್ರೇನ್ ಸಂಘರ್ಷವನ್ನು ಬಗೆಹರಿಸುವ ಅಮೆರಿಕದ ಪ್ರಯತ್ನಗಳನ್ನು ದುರ್ಬಲಗೊಳಿಸುವ ಕ್ರಮಗಳಿಂದ ದೂರವಿರಲು ಬ್ರಿಟನ್ ಅಧಿಕಾರಿಗಳಿಗೆ ರಷ್ಯಾ ಕರೆ ನೀಡಿದೆ. ಸಂಘರ್ಷದ ಸಮಗ್ರ, ನ್ಯಾಯಯುತ ಮತ್ತು ಸುಸ್ಥಿರ ಇತ್ಯರ್ಥಕ್ಕಾಗಿ ರಷ್ಯಾ ಮತ್ತು ಅಮೆರಿಕದ ನಾಯಕತ್ವವು ನಿಜವಾದ ಪ್ರಯತ್ನಗಳನ್ನು ಮಾಡುತ್ತಿದೆ ಎಂದು ರಷ್ಯಾದ ವಿದೇಶಾಂಗ ಸಚಿವಾಲಯದ ವಕ್ತಾರೆ ಮಾರಿಯಾ ಜಖರೋವಾ ಹೇಳಿದ್ದಾರೆ. ಬ್ರಿಟನ್‌ನ ಹೇಳಿಕೆಗಳು ರಷ್ಯಾ ಮತ್ತು ಅಮೆರಿಕದ ಪ್ರಯತ್ನಗಳನ್ನು ದುರ್ಬಲಗೊಳಿಸುತ್ತವೆ. ಅಂತಹ ಹೇಳಿಕೆಗಳನ್ನು ಅಪಾಯಕಾರಿ ಮತ್ತು ಅಜಾಗರೂಕ ರಾಜಕೀಯ ತಂತ್ರಗಳೆಂದು ಕರೆದ ಅವರು, ಮಾತುಕತೆ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡದಂತೆ ಬ್ರಿಟನ್ ಅಧಿಕಾರಿಗಳನ್ನು ಒತ್ತಾಯಿಸಿದ್ದಾರೆ.

><><><><><><

ಟೆನಿಸ್‌ನಲ್ಲಿ, ಹಾಲಿ ಚಾಂಪಿಯನ್ ಮತ್ತು ವಿಶ್ವದ ನಂಬರ್ ೧ ಆಟಗಾರ ಜಾನಿಕ್ ಸಿನ್ನರ್ ಅನಾರೋಗ್ಯದ ಕಾರಣ ನಿವೃತ್ತರಾದ ನಂತರ, ಓಹಿಯೋದಲ್ಲಿ ನಡೆದ ಫೈನಲ್ ಪಂದ್ಯದಲ್ಲಿ ತಮ್ಮ ಚೊಚ್ಚಲ ಸಿನ್ಸಿನಾಟಿ ಓಪನ್ ಪ್ರಶಸ್ತಿಯನ್ನು ವಿಶ್ವದ ೨ನೇ ಶ್ರೇಯಾಂಕಿತ ಕಾರ್ಲೋಸ್ ಅಲ್ಕರಾಜ್ ಗೆದ್ದರು.ಆರಂಭಿಕ ಸೆಟ್‌ನಲ್ಲಿ ೦-೫ ಅಂತರದಿಂದ ಅವರು ಹಿನ್ನಡೆ ಅನುಭವಿಸಿದರು. ಫೈನಲ್, ಕೇವಲ ೨೫ ನಿಮಿಷಗಳ ಕಾಲ ನಡೆಯಿತು. ಸಿನ್ನರ್ ವೈದ್ಯರನ್ನು ಕರೆದು, ನಂತರ ಪಂದ್ಯವನ್ನು ಬಿಟ್ಟುಕೊಟ್ಟರು. ಕಾರ್ಲೋಸ್ ಮೋಯಾ ಮತ್ತು ರಾಫೆಲ್ ನಡಾಲ್ ಅವರ ನಂತರ ಸಿನ್ಸಿನಾಟಿ ಪ್ರಶಸ್ತಿಯನ್ನು ಗೆದ್ದ ಮೂರನೇ ಸ್ಪೇನ್ ಆಟಗಾರ ಅಲ್ಕರಾಜ್ ಆಗಿದ್ದಾರೆ. ಇದು ಅವರ ವೃತ್ತಿಜೀವನದ ೨೨ ನೇ ಪ್ರಶಸ್ತಿಯಾಗಿದೆ.

><><><><><><

ಕರ್ನಾಟಕದ ಕರಾವಳಿ ಮತ್ತು ಒಳನಾಡಿನ ಹಲವಾರು ಜಿಲ್ಲೆಗಳಲ್ಲಿ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಬಂಗಾಳ ಕೊಲ್ಲಿಯಲ್ಲಿ ಕಡಿಮೆ ಒತ್ತಡದ ಪ್ರದೇಶ ನಿರ್ಮಾಣವಾಗಿರುವುದರಿಂದ ಹವಾಮಾನ ಇಲಾಖೆ ಇಂದು ಈ ಜಿಲ್ಲೆಗಳಲ್ಲಿ ರೆಡ್ ಅಲರ್ಟ್ ಘೋಷಿಸಿದೆ. ಉಡುಪಿ ಮತ್ತು ದಕ್ಷಿಣ ಕನ್ನಡದ ಕರಾವಳಿ ಜಿಲ್ಲೆಗಳಲ್ಲಿ ಶಾಲೆಗಳು ಮತ್ತು ಅಂಗನವಾಡಿಗಳಿಗೆ ರಜೆ ಘೋಷಿಸಲಾಗಿದೆ. ಮೀನುಗಾರರು ಮತ್ತು ಪ್ರವಾಸಿಗರು ಸಮುದ್ರ ಮತ್ತು ನದಿ ದಂಡೆಗಳಿಂದ ದೂರವಿರುವಂತೆ ಮನವಿ ಮಾಡಲಾಗಿದೆ. ಬೆಳಗಾವಿ, ಚಿಕ್ಕಮಗಳೂರು ಮತ್ತು ಕೊಡಗು ಜಿಲ್ಲೆಯಲ್ಲಿ ಕೂಡ ಭಾರೀ ಮಳೆಯಾಗುತ್ತಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ. ಇನ್ನೊಂದೆಡೆ, ಗುಜರಾತ್, ಮಹಾರಾಷ್ಟ್ರ, ಕೊಂಕಣ ಮತ್ತು ಗೋವಾದಲ್ಲಿ ಇಂದು ಅತಿ ಹೆಚ್ಚು ಮಳೆಯಾಗುವ ಸಾಧ್ಯತೆ ಇದ್ದು, ರೆಡ್ ಅಲರ್ಟ್ ಘೋಷಿಸಲಾಗಿದೆ. ಛತ್ತೀಸ್‌ಗಢ, ಕೇರಳ, ಮಾಹೆ, ತೆಲಂಗಾಣ ಮತ್ತು ವಿದರ್ಭದಲ್ಲಿ ತೀವ್ರ ಮಳೆಯಾಗುವ ಸಾಧ್ಯತೆ ಇದೆ. ಆಂಧ್ರ ಪ್ರದೇಶದ ಕರಾವಳಿ, ಪೂರ್ವ ರಾಜಸ್ಥಾನ, ಹಿಮಾಚಲ ಪ್ರದೇಶ, ಜಮ್ಮು ಮತ್ತು ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್, ಮುಜಫರಾಬಾದ್ ಸೇರಿದಂತೆ ಈಶಾನ್ಯ ಭಾರತದಾದ್ಯಂತ ಭಾರೀ ಮಳೆಯಾಗುವ ನಿರೀಕ್ಷೆಯಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

><><><><><><><><

ಪ್ರಧಾನಮಂತ್ರಿ ನರೇಂದ್ರ ಮೋದಿ ಇದೇ ತಿಂಗಳ ೩೧ ರಂದು ಆಕಾಶವಾಣಿಯಲ್ಲಿ ಪ್ರಸಾರವಾಗುವ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ದೇಶ ಮತ್ತು ವಿದೇಶದಲ್ಲಿರುವ ಭಾರತೀಯ ಸಮುದಾಯದೊಂದಿಗೆ ತಮ್ಮ ಮನದಾಳದ ಮಾತನ್ನು ಹಂಚಿಕೊಳ್ಳಲಿದ್ದಾರೆ.

><><><><><><><><